ಕಾಮಗಾರಿ ವಿಳಂಬವಾಗಲು ಕಾರಣವೇನು?

ಇ) ಈ ಕಾಮಗಾರಿ ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು):

ಅ) ಶಂಕು ಸ್ಥಾಪನೆಯನ್ನು ದಿನಾಂಕ: 1-9-98ರಂದು ನೆರವೇರಿಸಲಾಗಿದೆ. ಮುಂದಿನ ಕ್ರಮ ಕೈಗೊಂಡು ಪ್ರಗತಿ ಸಾಧಿಸಲಾಗುವುದು.

ಆ) ಟೆಂಡರ್ ಕರೆದಿರುವುದಿಲ್ಲ. ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಿ ಕೆಲಸವನ್ನು ಪ್ರಾರಂಭಿಸಲಾಗುವುದು.

ಇ) ಪ್ರಸ್ತುತ ಸದರಿ ಕೆಲಸಕ್ಕೆ ಮೊತ್ತ 9 ಲಕ್ಷ ರೂಪಾಯಿಗಳಿಗೆ ಮಂಜೂರಾತಿ ನೀಡಲಾಗಿದ್ದು, ಟಂಡರ್ ಆಧಾರದ ಮೇಲೆ ಕೆಲಸವನ್ನು ಕೈಗೊಳ್ಳಲಾಗುವುದು. ಟೆಂಡರ್‌ನ್ನು 10 ದಿನಗಳೊಳಗಾಗಿ ಕರೆಯಲಾಗುವುದು.

ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆಗೆ ತಿದ್ದುಪಡಿ.

535: (3840)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆ 1966ಕ್ಕೆ ತಿದ್ದುಪಡಿ ತರಲು ಮುಂದಾಗಿದೆಯೇ?

ಆ) ಈ ತಿದ್ದುಪಡಿಯಿಂದ ಅಡಿಕೆ ಬೆಳೆಗಾರರಿಗೆ ಹಾಗೂ ದಲ್ಲಾಲರಿಗೆ ಆಗುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಇದಕ್ಕೆ ಸರ್ಕಾರ ಕೈಗೊಳ್ಳುವ ಪರಿಹಾರೋಪಾಯವೇನು?

ಶ್ರೀ ಹೆಚ್.ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

ವಿರಾಜಪೇಟೆ ಪಟ್ಟಣದ ಕೊಳಚೆ ಪ್ರದೇಶದ ಘೋಷಣೆ.

536 (3735)

ಶ್ರೀ ಹೆಚ್. ಡಿ. ಬಸವರಾಜು (ವಿರಾಜಪೇಟೆ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ಪಟ್ಟಣದ ಕೆಲ ಆಯ್ದ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸಲು ಪ್ರಸ್ತಾವನೆಯನ್ನು ಕಳುಹಿಸಿರುವ ವಿಚಾರ ಸರ್ಕಾರದಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಹೆಚ್. ಡಿ. ರೇವಣ್ಣ (ವಸತಿ ಸಚಿವರು.)

ಅ) ಹೌದು.

ಆ) ಕೊಡಗು ಜಿಲ್ಲೆಯ ವಿರಾಜಪೇಟೆ ಪಟ್ಟಣದ ಪರಿಮಿತಿಯಲ್ಲಿರುವ ಸುಂಕದಕಟ್ಟೆ, ಹರಿಕೇರಿ ಮತ್ತು ಮೊಗರಗಲ್ಲಿ ಈ ಮೂರು ಕೊಳಚೆ ಪ್ರದೇಶಗಳನ್ನು ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯ ಕಾಯಿದೆ ಅಡಿಯಲ್ಲಿ ಘೋಷಿಸುವ ಬಗ್ಗೆ ಪ್ರಸ್ತಾವನೆ ಕೊಡಗು ಜಿಲ್ಲಾಧಿಕಾರಿಗಳಿಗೆ ಕೊಳಚೆ ನಿರ್ಮೂಲನಾ ಮಂಡಳಿಯಿಂದ ಕಳುಹಿಸಿದ್ದು, ಜಿಲ್ಲಾಧಿಕಾರಿಗಳ ಪರಿಶೀಲನೆಯಲ್ಲಿದ್ದು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಕ್ರಿಮಿನಾಶಕಗಳ ಮತ್ತು ರಾಸಾಯನಿಕ ಗೊಬ್ಬರಗಳ ವ್ಯತಿರಿಕ್ತ ಪರಿಣಾಮ.

537 (3108)

ಶ್ರೀ ಡಿ. ಆರ್. ಪಾಟೀಲ್ (ಗದಗ್): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಸಾಯನಿಕ ಕ್ರಿಮಿನಾಶಕ ಹಾಗೂ ರಾಸಾಯನಿಕ ಗೊಬ್ಬರಗಳ ಬಳಕೆಯಿಂದ ಭೂಮಿ ತನ್ನ ಸತ್ವ ಕಳೆದುಕೊಂಡು ಬರಡಾಗುತ್ತಿರುವುದು ಹಾಗೂ ಜಲ, ವಾಯು